# ಕೋರ್ಟ್‌ಗೆ ಅಗೌರವ: ಶಾಸಕರು ಪೊಲೀಸ್ ವಶಕ್ಕೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ವಿವಿಧ ಅಪರಾಧ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗುವಂತೆ ಹಲವು ಬಾರಿ ಸೂಚಿಸಿದ ನಂತರವೂ ನ್ಯಾಯಾಲಯಕ್ಕೆ ಹಾಜರಾಗದ ಇಬ್ಬರು ಶಾಸಕರನ್ನು ದಿನವಿಡೀ ಪೊಲೀಸ್ ವಶಕ್ಕೆ ಒಪ್ಪಿಸಿದ ಘಟನೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ನಲ್ಲಿ ಸೋಮವಾರ ಕಂಡು ಬಂತು.

ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ ಬಿ.ನಾಗೇಂದ್ರ ಹಾಗೂ ದಾವಣಗೆರೆ ಉತ್ತರ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕರವೀಂದ್ರನಾಥ್ ಅಲ್ಪಾವಧಿ ಕಾಲಕ್ಕೆ ಪೊಲೀಸರ ಅತಿಥಿಗಳಾಗಿದ್ದ ಶಾಸಕ ಮಹಾಶಯರು. ಇವರಿಬ್ಬರ ವಿರುದ್ಧವೂ ಕ್ರಿಮಿನಲ್ ಪ್ರಕರಣಗಳಿದ್ದು, ಅವುಗಳ ವಿಚಾರಣೆಗೆ ಹಾಜರಾಗುವಂತೆ ಬೆಂಗಳೂರಿನ ಜನಪ್ರತಿನಿಧಿಗಳ ವಿರುದ್ಧದ ಪ್ರಕರಣಗಳ ವಿಚಾರಣಾ ವಿಶೇಷ ನ್ಯಾಯಾಲಯ ಹಲವು ಬಾರಿ ಸಮನ್ಸ್ ಜಾರಿ ಮಾಡಿತ್ತು.

ನ್ಯಾಯಾಲಯ ವಿಚಾರಣೆಗೆ ಹಾಜರಾಗದೆ, ಆದೇಶಕ್ಕೂ ಸೊಪ್ಪು ಹಾಕದೆ ಬೇಜವಾಬ್ದಾರಿ ತೋರಿದ್ದ ಇವರನ್ನು ಬಂಧಿಸಿ ವಿಚಾರಣೆಗೆ ಹಾಜರುಪಡಿಸುವಂತೆ ವಿಶೇಷ ಕೋರ್ಟ್ ಪೊಲೀಸರಿಗೆ ಆದೇಶಿಸಿತ್ತು. ಈ ಹಿನ್ನೆಲೆಯಲ್ಲಿ ನ್ಯಾಯಾಲಯ ಹೊರಡಿಸಿದ್ದ ಜಾಮೀನು ರಹಿತ ಬಂಧನ ವಾರಂಟ್ ಅನ್ನು ಹಿಂತೆಗೆದುಕೊಳ್ಳುವಂತೆ ಮನವಿ ಮಾಡಲು ಶಾಸಕರಿಬ್ಬರೂ ನ್ಯಾಯಾಲಯಕ್ಕೆ ಹಾಜರಾಗಿದ್ದರು. ಶಾಸಕರ ಈ ನಡವಳಿಕೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ವಿಶೇಷ ಕೋರ್ಟ್‌ನ ನ್ಯಾಯಾಧೀಶ ರಾಮಚಂದ್ರ ಡಿ. ಹುದ್ದಾರ್ ಅವರು ಇಬ್ಬರು ಶಾಸಕರು ಹಾಗೂ ಇನ್ನಿತರ ಆರೋಪಿಗಳನ್ನು ಪೊಲೀಸರ ವಶಕ್ಕೆ ಒಪ್ಪಿಸಿದರು.

ಬೆಳಗ್ಗೆ ಕಲಾಪದ ವೇಳೆಗೆ ವಿಚಾರಣೆಗೆ ಹಾಜರಾಗಿದ್ದ ಶಾಸಕರು ಹಾಗೂ ಇನ್ನಿತರೆ ಆರೋಪಿಗಳನ್ನು ನ್ಯಾಯಾಲಯ 11 ಗಂಟೆಯಿಂದ ಸಂಜೆ 4 ಗಂಟೆವರೆಗೆ ಪೊಲೀಸರ ವಶಕ್ಕೆ ಒಪ್ಪಿಸಿತು. ನಂತರ ಸಂಜೆ 4.30ರ ಸುಮಾರಿಗೆ ತಲಾ 250 ರು. ದಂಡ ವಿಧಿಸಿ, ಮುಂದೆಂದೂ ಇಂತಹ ದುರ್ವರ್ತನೆ ತೋರದಂತೆ ಕಟು ಎಚ್ಚರಿಕೆ ನೀಡಿತು. ಬಳಿಕ ನ್ಯಾಯಾಲಯ ಹೊರಡಿಸಿದ್ದ ಜಾಮೀನು ರಹಿತ ವಾರಂಟ್ ಹಿಂತೆಗೆದುಕೊಂಡಿತು.

ಶಾಸಕ ಬಿ.ನಾಗೇಂದ್ರ, ಬಳ್ಳಾರಿಯಲ್ಲಿ ಅಕ್ರಮ ಗಣಿಗಾರಿಕೆ ನಡೆಸಿದ ಆರೋಪ ಪ್ರಕರಣದಲ್ಲಿ ಆರೋಪಿಯಾಗಿದ್ದಾರೆ. ಇನ್ನು ದಾವಣಗೆರೆ ಶಾಸಕ ರವೀಂದ್ರನಾಥ್, ಹೊನ್ನಾಳಿ ಶಾಸಕ ಎಂ.ಪಿ. ರೇಣುಕಾಚಾರ್ಯ ವಿರುದ್ಧ ಚುನಾವಣೆ ನೀತಿ ಸಂಹಿತೆ ಉಲ್ಲಂಘಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದ ಆರೋಪದಲ್ಲಿ ಪ್ರಕರಣ ದಾಖಲಿಸಲಾಗಿದೆ